ಕರ್ನಾಟಕ ಸರ್ಕಾರ

ನಿರ್ದೇಶಕರ ಕಚೇರಿ, ಪದವಿ ಪೂರ್ವ ಶಿಕ್ಷಣ ಇಲಾಖೆ, 18ನೇ ಅಡ್ಡರಸ್ತೆ, ಮಲ್ಲೇಶ್ವರಂ,ಬೆಂಗಳೂರು –12.

ಸಂಖ್ಯೆ :ಪಪೂಶಿಇ/ಶೈ.ಶಾ/ಪ್ಲಾ.ನಿ.ಬಗ್ಗೆ/2021-22 ದಿನಾಂಕ: 20.11.2021.

## ಸುತ್ತೋಲೆ

ವಿಷಯ: ಪದವಿ ಪೂರ್ವ ಶಿಕ್ಷಣ ಇಲಾಖೆಯ ಕಛೇರಿಗಳು & ಪದವಿ ಪೂರ್ವ ಕಾಲೇಜುಗಳಲ್ಲಿ ಹೂಗುಚ್ಛ ನೀಡುವುದನ್ನು, ಕಾಗದದ ಹಾಳೆ ಮತ್ತು ಪ್ಲಾಸ್ಟಿಕ್‌ನಿಂದ ಪುಸ್ತಕಗಳನ್ನು ಪ್ಯಾಕ್ ಮಾಡಿ ನೀಡುವುದನ್ನು ನಿಷೇಧಿಸುವ ಕುರಿತು.

ಉಲ್ಲೇಖ: ಮಾನ್ಯ ಪ್ರಾಥಮಿಕ, ಪ್ರೌಢಶಿಕ್ಷಣ ಮತ್ತು ಸಕಾಲ ಸಚಿವರು ಇವರ ಪತ್ರ ಸಂಖ್ಯೆ:ಪಿ.ಎಸ್.ಇ.ಎಸ್.ಎಂ/80/2021-22, ದಿನಾಂಕ:02.11.2021.

********

ಸನ್ಮಾನ್ಯ ಪ್ರಾಥಮಿಕ, ಪ್ರೌಢಶಿಕ್ಷಣ ಮತ್ತು ಸಕಾಲ ಸಚಿವರು ಪದವಿ ಪೂರ್ವ ಶಿಕ್ಷಣ ಇಲಾಖೆಯ ಕಛೇರಿಗಳು ಮತ್ತು ಪದವಿ ಪೂರ್ವ ಕಾಲೇಜುಗಳಿಗೆ ಭೇಟಿ ನೀಡಿದ ಸಂದರ್ಭದಲ್ಲಿ ಪ್ಲಾಸ್ಟಿಕ್ ಸುತ್ತಿದ ಹೂಗುಚ್ಛ ನೀಡಿದ್ದು, ಕಾಗದದ ಹಾಳೆ ಮತ್ತು ಪ್ಲಾಸ್ಟಿಕ್‌ನಿಂದ ಪುಸ್ತಕಗಳನ್ನು ಪ್ಯಾಕ್ ಮಾಡಿ ನೀಡಿದ್ದು, ಪ್ಯಾಕ್ ಮಾಡಿದ ಕಾಗದ ವ್ಯರ್ಥವಾಗುವುದು ಹಾಗೂ ಪ್ಲಾಸ್ಟಿಕ್ ಪರಿಸರಕ್ಕೆ ಹಾನಿ ಉಂಟುಮಾಡುವುದು ಎಂಬ ಅಂಶವು ಮಾನ್ಯ ಸಚಿವರ ಗಮನಕ್ಕೆ ಬಂದಿರುತ್ತದೆ. ಸರ್ಕಾರದ ಆದೇಶ ಸಂಖ್ಯೆ: ಅಪಜೀ 17 ಇಪಿಸಿ 2012, ದಿನಾಂಕ:11.03.2016ರ ಆದೇಶದಲ್ಲಿ ರಾಜ್ಯದಲ್ಲಿ ಪ್ಲಾಸ್ಟಿಕ್ ಬಳಕೆಯನ್ನು ನಿಷೇಧಿಸಿದೆ, ಅದರಂತೆ ಯಾವುದೇ ದಪ್ಪದ ರೀತಿಯ ಪ್ಲಾಸ್ಟಿಕ್ ಕ್ಯಾರಿಬ್ಯಾಗ್, ಭಿತ್ತಿಪತ್ರ, ತೋರಣ, ಪ್ಲಾಸ್ಟಿಕ್ ಬಾವುಟ, ಫ್ಲೆಕ್ಸ್, ಪ್ಲಾಸ್ಟಿಕ್ ತಟ್ಟೆ, ಲೋಟ, ಚಮಚ, ಥರ್ಮಕೋಲ್ ಹಾಗೂ ಪ್ಲಾಸ್ಟಿಕ್ ಬೀಡ್ಸ್‌ಗಳಿಂದ ತಯಾರಾದ ವಸ್ತುಗಳ ಬಳಕೆಯನ್ನು ರಾಜ್ಯಾದ್ಯಾಂತ ನಿಷೇಧಿಸಲು ನಿರ್ದೇಶಿಸಲಾಗಿದೆ.

ಈ ಹಿನ್ನಲೆಯಲ್ಲಿ ಮಾನ್ಯ ಮುಖ್ಯಮಂತ್ರಿಗಳು, ಸಚಿವರು, ಶಾಸಕರು, ಅಧಿಕಾರಿಗಳು ಹಾಗೂ ಗಣ್ಯವ್ಯಕ್ತಿಗಳು ಪದವಿ ಪೂರ್ವ ಶಿಕ್ಷಣ ಇಲಾಖೆಯ ಕಛೇರಿಗಳು ಹಾಗೂ ಕಾಲೇಜುಗಳಿಗೆ ಭೇಟಿ ನೀಡಿದ ಸಂದರ್ಭದಲ್ಲಿ ಪ್ಲಾಸ್ಟಿಕ್ ಹೊಂದಿದ ಯಾವುದೇ ರೀತಿಯ ವಸ್ತುವನ್ನು ಬಳಸಬಾರದೆಂದು ಈ ಮೂಲಕ ಸೂಚಿಸುತ್ತಾ, ಪದವಿ ಪೂರ್ವ ಶಿಕ್ಷಣ ಇಲಾಖೆಯ ಕಛೇರಿಗಳು ಹಾಗೂ ಎಲ್ಲಾ ಪದವಿ ಪೂರ್ವ ಕಾಲೇಜುಗಳಲ್ಲಿ ಪ್ಲಾಸ್ಟಿಕ್ ಬಳಕೆಯನ್ನು ಸಂಪೂರ್ಣ ನಿಷೇಧಿಸಿದೆ. ಹಾಗೂ ಈ ಕುರಿತಂತೆ ಜಾಗೃತಿ ಮೂಡಿಸುವುದು.

R Kusum 20/11/21

ಜಂಟಿ ನಿರ್ದೇಶಕರು(ಶೈಕ್ಷಣಿಕ)
ಪದವಿ ಪೂರ್ವ ಶಿಕ್ಷಣ ಇಲಾಖೆ.

ಪ್ರತಿಯನ್ನು:

1. ಗೌರವಪೂರ್ವಕವಾಗಿ ಆಪ್ತ ಕಾರ್ಯದರ್ಶಿಗಳಿಗೆ, ಸನ್ಮಾನ್ಯ ಪ್ರಾಥಮಿಕ, ಪ್ರೌಢಶಿಕ್ಷಣ ಮತ್ತು ಸಕಾಲ ಸಚಿವರು, ಕರ್ನಾಟಕ ಸರ್ಕಾರ ಇವರ ಅವಗಾಹನೆಗೆ ಸಲ್ಲಿಸಲು.
2. ರಾಜ್ಯದ ಎಲ್ಲಾ ಜಿಲ್ಲಾ ಉಪ ನಿರ್ದೇಶಕರಿಗೆ ಮುಂದಿನ ಸೂಕ್ತ ಕ್ರಮಕ್ಕಾಗಿ.
3. ರಾಜ್ಯದ ಎಲ್ಲಾ ಸರ್ಕಾರಿ/ಅನುದಾನಿತ/ಖಾಸಗಿ ಪದವಿ ಪೂರ್ವ ಕಾಲೇಜಿನ ಪ್ರಾಂಶುಪಾಲರಿಗೆ ಮುಂದಿನ ಸೂಕ್ತ ಕ್ರಮಕ್ಕಾಗಿ.
4. ಕಛೇರಿ ಪ್ರತಿ.